(

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1507 |
| 2) ಮಾನ್ಯ ಸದಸ್ಯರ ಹೆಸರು | : | ಜಗದೇವ್ ಗುತ್ತೇದಾರ್ (ವಿಧಾನಸಭಾ ಕ್ಷೇತ್ರ) |
| 3) ಉತ್ತರಿಸುವ ದಿನಾಂಕ | : | 18/12/2025 |
| 4) ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಪೊಲೀಸ್ ಠಾಣೆಗಳಿವೆ ಮತ್ತು ಅಲ್ಲಿನ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಎಲ್ಲಾ ಪೊಲೀಸ್ ಠಾಣೆಗಳಿಗೆ ಸಿಬ್ಬಂದಿಗಳನ್ನು ಒದಗಿಸಲಾಗಿದೆಯೇ; | ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 28 ಪೊಲೀಸ್ ಠಾಣೆಗಳಿದ್ದು, ಸದರಿ ಠಾಣೆಗಳಿಗೆ ಮಂಜೂರಾಗಿರುವ 1175 ಹುದ್ದೆಗಳಲ್ಲಿ 1026 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, 149 ಹುದ್ದೆಗಳು ಖಾಲಿ ಇರುತ್ತದೆ. |
| ಆ) | ಸಿಬ್ಬಂದಿಗಳ ಕೊರತೆ ಇದ್ದರೆ ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು; | ಕಲಬುರಗಿ ಜಿಲ್ಲೆಯಲ್ಲಿ ಪ್ರಸ್ತುತ 146 ಸಿಪಿಸಿ ಹುದ್ದೆಗಳ ರಿಕ್ತಸ್ಥಾನವಿದ್ದು, ಸದರಿ ಖಾಲಿಯಿರುವ ಹುದ್ದೆಗಳನ್ನು ನೇಮಕಾತಿ ಮೂಲಕ ಭರ್ತಿ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ನೇಮಕಾತಿ ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ ಹಾಗೂ ತಾತ್ಕಾಲಿಕವಾಗಿ 167 ಗೃಹರಕ್ಷಕ ಸಿಬ್ಬಂದಿಗಳನ್ನು ಜಿಲ್ಲೆಯ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ಕಾರ್ಯಗಳಿಗೆ ನಿಯುಕ್ತಿಗೊಳಿಸಲಾಗಿರುತ್ತದೆ. |
| ಇ) | ಕಾಳಗಿ ತಾಲ್ಲೂಕಿನಲ್ಲಿ ಸಿಪಿಐ ಕಛೇರಿ ಕಟ್ಟಡ ಮತ್ತು ಸಿಪಿಐ ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ; ಇದ್ದರೆ, ಅವುಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳುತ್ತಿದೆ? | ಕಾಳಗಿ ತಾಲ್ಲೂಕಿನಲ್ಲಿ ಸಿಪಿಐ ಕಛೇರಿ ಕಟ್ಟಡ ಮತ್ತು ಸಿಪಿಐ ಸಿಬ್ಬಂದಿಗಳಿಗೆ ವಸತಿ ಗೃಹಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕಾಳಗಿ ವೃತ್ತ ಕಛೇರಿಯು ಪ್ರಸ್ತುತ ಕಾಳಗಿಯ ರೈತ ಭವನ ಕಟ್ಟಡದಲ್ಲಿ ಬಾಡಿಗೆ ರಹಿತ ಕರ್ತವ್ಯ ನಿರ್ವಹಿಸುತ್ತಿದ್ದು, ಇದರಲ್ಲಿ ಸಾಕಷ್ಟು ಸ್ಥಳಾವಕಾಶ ಇರುವುದಿಲ್ಲ. ಕಾಳಗಿಯಲ್ಲಿ ವೃತ್ತ ಕಛೇರಿ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಅನುದಾನ ಲಭ್ಯತೆಯ ಮೇಲೆ ಪರಿಶೀಲಿಸಲಾಗುವುದು.<br><br>ಕಾಳಗಿ ಸಿಪಿಐ ಕಛೇರಿಯಲ್ಲಿ 01 ಸಿಹೆಚ್‌ಸಿ ಮತ್ತು 02 ಸಿಪಿಸಿ ಹುದ್ದೆಗಳ ಮಂಜೂರಾತಿ ಬಲವಿದ್ದು, ಸರ್ಕಾರದ ಆದೇಶ ಸಂಖ್ಯೆ: ಪಿಡಿಎಸ್/28/ಹೆಚ್ ಕೆಡಿ/2025, ದಿನಾಂಕ: 25/07/2025ರಲ್ಲಿ 2025-26ನೇ ಸಾಲಿನ ಆಯವ್ಯಯದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಲಾಗಿರುವ ಅನುದಾನದಲ್ಲಿ ಪೊಲೀಸ್ ಇಲಾಖೆಗೆ ಅನುದಾನವನ್ನು ಹಂಚಿಕೆ ಮಾಡಿ ಕ್ರಿಯಾ ಯೋಜನೆ ತಯಾರಿಸಿ, ಅನುಮೋದನೆ ಪಡೆದು |

(

| | | |
|---|---|---|
| | | ಅನುಷ್ಠಾನಗೊಳಿಸಲು ಆದೇಶಿಸಿದ್ದು, ಈ ಸಂಬಂಧ ಕಾಳಗಿಯ ಸರ್ವೇ ನಂ. 255/1ರ 02 ಎಕರೆ ಜಾಗದಲ್ಲಿ 12 ಪಿಸಿ ವಸತಿ ಗೃಹಗಳನ್ನು ರೂ.410.20 ಲಕ್ಷಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಯೋಜನೆಯಡಿಯಲ್ಲಿ ನಿರ್ಮಾಣ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಹೆಚ್‌ಡಿ 239 ಪಿಓಪಿ 2025**

**(ಡಾ|| ಜಿ.ಪರಮೇಶ್ವರ)**
ಗೃಹ ಸಚಿವರು.